**Akashvani : Bangalore**
**Regional Bulletin In Kannada**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**03.06.2026 / 18.40 hrs**

---

ಮುಖ್ಯಾಂಶಗಳು

೧. ರಾಜ್ಯದ ೨೫ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಪ್ರಮಾಣವಚನ ; ರಾಜ್ಯಪಾಲರಿಂದ ಗೌಪ್ಯತಾ ವಿಧಿ ಬೋಧನೆ

೨. ಉಪಮುಖ್ಯಮಂತ್ರಿಯಾಗಿ ಡಾ.ಜಿ.ಪರಮೇಶ್ವರ್, ಸಂಪುಟ ದರ್ಜೆಯ ಸಚಿವರಾಗಿ ೧೨ ಮಂದಿ ಪ್ರತಿಜ್ಞಾ ವಿಧಿ ಸ್ವೀಕಾರ

೩. ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ

೪. ರಾಜ್ಯ ಹೈಕೋರ್ಟ್‌ಗೆ ೬ ನ್ಯಾಯಮೂರ್ತಿಗಳ ನೇಮಕಕ್ಕೆ ಸುಪ್ರೀಂಕೋರ್ಟ್ ಕೊಲಿಜಿಯಂ ಶಿಫಾರಸ್ಸು

೫. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನಾಳೆಯಿಂದ ರಾಜ್ಯ ಪ್ರವಾಸ ; ಯಾದಗಿರಿಯಲ್ಲಿ ರೈತರ ತರಬೇತಿ ಕೇಂದ್ರ ಉದ್ಘಾಟನೆ

೬. ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಗುಡುಗು ಸಹಿತ ಮಳೆ ಸಂಭವ ; ಹವಾಮಾನ ಇಲಾಖೆ ಮುನ್ಸೂಚನೆ

---

ರಾಜ್ಯದ ೨೫ನೇ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಇಂದು ಸಂವಿಧಾನದ ಪ್ರತಿ ಹಿಡಿದು ಪ್ರಮಾಣವಚನ ಸ್ವೀಕರಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರತಿಜ್ಞಾವಿಧಿ ಬೋಧಿಸಿದರು.

ಉಪಮುಖ್ಯಮಂತ್ರಿಯಾಗಿ ಡಾ.ಜಿ.ಪರಮೇಶ್ವರ್ ಹಾಗೂ ಸಚಿವರಾಗಿ ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಎಂ.ಬಿ.ಪಾಟೀಲ್, ರಾಮಲಿಂಗಾರೆಡ್ಡಿ, ಸತೀಶ್ ಜಾರಕಿಹೊಳಿ, ಕೃಷ್ಣ ಬೈರೇಗೌಡ, ಪ್ರಿಯಾಂಕ್ ಖರ್ಗೆ, ಯು.ಟಿ.ಖಾದರ್, ಈಶ್ವರ್ ಖಂಡ್ರೆ, ಯತೀಂದ್ರ ಸಿದ್ದರಾಮಯ್ಯ, ಬೈರತಿ ಸುರೇಶ್, ಶರಣ್‌ಪ್ರಕಾಶ್ ಪಾಟೀಲ್ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಸಮಾರಂಭದಲ್ಲಿ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಕ್ರು, ಕಾಂಗ್ರೆಸ್ ಹಿರಿಯ ಮುಖಂಡರಾದ ರಾಹುಲ್‌ಗಾಂಧಿ, ಮಲ್ಲಿಕಾರ್ಜುನ್ ಖರ್ಗೆ, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಕೇರಳಂ ಮುಖ್ಯಮಂತ್ರಿ ವಿ.ಡಿ.ಸತೀಸನ್, ಹಿಮಾಚಲಪ್ರದೇಶ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು, ಸೇರಿದಂತೆ ಹಲವು ಗಣ್ಯರು ಪ್ರಮಾಣವಚನ ಸಮಾರಂಭದಲ್ಲಿ ಉಪಸ್ಥಿತರಿದ್ದರು. ಸ್ವಾಮೀಜಿಗಳು, ಧಾರ್ಮಿಕ ಮುಖಂಡರು, ಚಲನಚಿತ್ರ ನಟರು, ಕೈಗಾರಿಕೋದ್ಯಮಿಗಳು ಸಮಾರಂಭಕ್ಕೆ ಸಾಕ್ಷಿಯಾದರು.

---

ಪ್ರಮಾಣವಚನ ಸ್ವೀಕರಿಸಿದ ಬಳಿಕ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಚಿವ ಸಂಪುಟದ ಸಹೋದ್ಯೋಗಿಗಳೊಂದಿಗೆ ವಿಧಾನಸೌಧದ ಮುಂದಿರುವ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ಬಳಿಕ ಅವರು, ಬಸವಣ್ಣ ಹಾಗೂ ಕೆಂಪೇಗೌಡ ಪ್ರತಿಮೆಗೂ ಪುಷ್ಪಾರ್ಚನೆ ಮಾಡಿದರು. ಪ್ರಮಾಣವಚನದ ವೇಳೆ ಮುಂಜಾಗ್ರತಾ ಕ್ರಮವಾಗಿ ವಿಧಾನಸೌಧ, ರಾಜಭವನದ ಬಳಿ ಬಿಗಿ ಪೊಲೀಸ್ ಸರ್ಪಗಾವಲು ಹಾಕಲಾಗಿತ್ತು. ಸುಮಾರು ೨ ಸಾವಿರಕ್ಕೂ ಅಧಿಕ ಪೊಲೀಸರನ್ನು ಭದ್ರತೆಗಾಗಿ ನಿಯೋಜಿಸಲಾಗಿತ್ತು.

---

ರಾಜ್ಯದ ೨೫ನೇ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಡಿ.ಕೆ.ಶಿವಕುಮಾರ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕೇಂದ್ರವು ಕರ್ನಾಟಕ ಸರ್ಕಾರದೊಂದಿಗೆ ಜನರ ಕಲ್ಯಾಣಕ್ಕಾಗಿ ನಿಕಟವಾಗಿ ಕಾರ್ಯ ನಿರ್ವಹಿಸಲಿದೆ ಎಂದು ತಿಳಿಸಿದ್ದಾರೆ.

---

ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಡಿ.ಕೆ.ಶಿವಕುಮಾರ್, ಕಾಂಗ್ರೆಸ್‌ನ ಪ್ರಭಾವಿ ನಾಯಕರಾಗಿದ್ದು, ಎನ್‌ಎಸ್‌ಯುಐ ವಿದ್ಯಾರ್ಥಿ ನಾಯಕರಾಗಿ ರಾಜಕೀಯ ಪ್ರವೇಶ ಮಾಡಿದ್ದರು. ತಮ್ಮ ನಾಲ್ಕು ದಶಕಗಳ ರಾಜಕೀಯ ಪಯಣದಲ್ಲಿ ಸಚಿವರಾಗಿ ಕೆಪಿಸಿಸಿ ಅಧ್ಯಕ್ಷರಾಗಿಯೂ

ಕಾರ್ಯ ನಿರ್ವಹಿಸಿದ್ದಾರೆ. ೧೯೮೫ರಲ್ಲಿ ಸಾತನೂರು ಕ್ಷೇತ್ರದಿಂದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ವಿರುದ್ಧ ಸ್ಪರ್ಧಿಸಿ ಗಮನ ಸೆಳೆದಿದ್ದರು.

೧೯೮೯ರಲ್ಲಿ ಅದೇ ಸಾತನೂರು ಕ್ಷೇತ್ರದಿಂದ ಮೊದಲ ಬಾರಿಗೆ ಕಾಂಗ್ರೆಸ್ ಶಾಸಕರಾಗಿ ಆಯ್ಕೆಯಾದರು. ೧೯೮೯ರಿಂದ ಇಲ್ಲಿಯವರೆಗೆ ಸತತವಾಗಿ ೮ ಬಾರಿ ಶಾಸಕರಾಗಿ ಆಯ್ಕೆಯಾದ ಹೆಗ್ಗಳಿಕೆ ಇವರದ್ದು, ನಗರಾಭಿವೃದ್ಧಿ, ಇಂಧನ, ಜಲಸಂಪನ್ಮೂಲ ಸೇರಿದಂತೆ ಹಲವು ಖಾತೆಗಳ ಸಚಿವರಾಗಿ ಕಾರ್ಯ ನಿರ್ವಹಿಸಿದ ಅನುಭವವು ಇವರಿಗಿದೆ. ೨೦೨೦ರಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾಗಿ ನೇಮಕಗೊಂಡಿದ್ದ ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲೇ ೨೦೨೩ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿತ್ತು. ಸಿದ್ದರಾಮಯ್ಯ ಸಂಪುಟದಲ್ಲಿ ಉಪಮುಖ್ಯಮಂತ್ರಿಯಾಗಿಯೂ ಕಾರ್ಯ ನಿರ್ವಹಿಸಿದ್ದರು.

೨೦೧೯ರಲ್ಲಿ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೊಳಗಾಗಿ ಸುಮಾರು ೫೦ ದಿನಗಳ ಕಾಲ ತಿಹಾರ್ ಜೈಲಿನಲ್ಲಿ ಸೆರೆವಾಸ ಅನುಭವಿಸಿದ್ದರು.

---

ಉಪಮುಖ್ಯಮಂತ್ರಿಯಾಗಿ ಆಯ್ಕೆಯಾದ ಡಾ.ಜಿ.ಪರಮೇಶ್ವರ್ ತಮ್ಮನ್ನು ಈ ಮಹತ್ವದ ಹುದ್ದೆಗೆ ಆಯ್ಕೆ ಮಾಡಿದ ಪಕ್ಷದ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ಮೇಲೆ ಇಟ್ಟಿರುವ ವಿಶ್ವಾಸ ಮತ್ತು ನಂಬಿಕೆಗೆ ಅಬಾರಿಯಾಗಿರುವುದಾಗಿ ತಿಳಿಸಿದ್ದಾರೆ.  ರಾಜ್ಯದ ಮುಖ್ಯಮಂತ್ರಿಯಾಗಲು ಬಯಸಿದ್ದೆ, ಆದರೆ ಹೈಕಮಾಂಡ್ ನಿರ್ಧಾರವನ್ನು ಒಪ್ಪಿಕೊಳ್ಳುವುದಾಗಿ ತಿಳಿಸಿದ್ದಾರೆ. ಬೇರೆ ಖಾತೆಯನ್ನು ನೀಡಿದರೂ ನಿರ್ವಹಿಸಲು ಬದ್ಧ ಎಂದು ಸ್ಪಷ್ಟಪಡಿಸಿದ್ದಾರೆ.

---

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನಾಳೆ ಯಾದಗಿರಿ ಜಿಲ್ಲೆಯ ಗುರುಮಠಲ್ ತಾಲ್ಲೂಕಿನ ಬದ್ದೇಪಲ್ಲಿ ಗ್ರಾಮದಲ್ಲಿ ರೈತರ ತರಬೇತಿ ಹಾಗೂ ಸಾಮಾನ್ಯ ಸೌಲಭ್ಯ ಕೇಂದ್ರ ಉದ್ಘಾಟಿಸಲಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೃಷಿ ಸಂಸ್ಕರಣೆ ಮತ್ತು ಗ್ರಾಮೀಣ ಉದ್ಯಮಶೀಲತೆಗೆ ಉತ್ತೇಜನ ನೀಡುವ ಮಹತ್ವದ ಯೋಜನೆಯಾಗಿ ಈ ಕೇಂದ್ರ ರೂಪುಗೊಂಡಿದೆ.

ನಬಾರ್ಡ್ ಸಹಯೋಗದಲ್ಲಿ ನಿರ್ಮಾಣಗೊಂಡಿರುವ ಈ ಯೋಜನೆಗೆ ನಿರ್ಮಲಾ ಸೀತಾರಾಮನ್ ಅವರ ಸಂಸದರ ಕ್ಷೇತ್ರಾಭಿವೃದ್ಧಿ ನಿಧಿಯಿಂದ ೫೦ ಲಕ್ಷ ರೂಪಾಯಿ ಅನುದಾನ ದೊರೆತಿದೆ. ರಾಜ್ಯ ಸರ್ಕಾರ ಒಂದು ಎಕರೆ ಭೂಮಿ ಮಂಜೂರು ಮಾಡಿದೆ. ಒಟ್ಟು ೨ ಕೋಟಿ ೧೯ ಲಕ್ಷ ರೂಪಾಯಿ ವೆಚ್ಚದ ಈ ಯೋಜನೆಯ ಉಳಿದ ಮೊತ್ತವನ್ನು ನಬಾರ್ಡ್ ಅಭಿವೃದ್ಧಿ ಸಹಾಯದ ಮೂಲಕ ಒದಗಿಸಲಾಗಿದೆ.

ಬಳಿಕ ಸಚಿವೆ ನಿರ್ಮಲ ಸೀತಾರಾಮನ್, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಅಭಿವೃದ್ಧಿ ಪ್ರಗತಿ ಕುರಿತ ಪರಿಶೀಲನಾ ಸಭೆ ನಡೆಸಲಿದ್ದಾರೆ. ಇದೇ ವೇಳೆ ಏಕ್ ಪೇಡ್ ಮಾ ಕೇ ನಾಮ್ ಉಪಕ್ರಮದಡಿಯಲ್ಲಿ ಭಾರತ್ ವ್ಯಾನ್ ಪ್ಲಾಂಟೇಷನ್ ಉದ್ಘಾಟನೆ ನೆರವೇರಿಸಲಿದ್ದಾರೆ.

ಸಂಜೆ ೪ ಗಂಟೆಗೆ ಅವರು ಹೊಸಪೇಟೆಗೆ ಪ್ರಯಾಣ ಬೆಳೆಸಲಿದ್ದಾರೆ.

---

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಸುಪ್ರೀಂಕೋರ್ಟ್ ಕೊಲಿಜಿಯಂ ರಾಜ್ಯದ ಉಚ್ಚನ್ಯಾಯಾಲಯಕ್ಕೆ ೬ ಮಂದಿ ಹಿರಿಯ ವಕೀಲರನ್ನು ನ್ಯಾಯಮೂರ್ತಿಗಳನ್ನಾಗಿ ನೇಮಕ ಮಾಡಲು ಶಿಫಾರಸ್ಸು ಮಾಡಿದೆ.

ರಾಜ್ಯ ಹೈಕೋರ್ಟ್‌ನ ನ್ಯಾಯಾಧೀಶರಾಗಿ ವಕೀಲರಾದ ರಾಘವೇಂದ್ರ ಸೀತಾರಾಮ್ ಶ್ರೀವತ್ಸ, ಹೇಮಾಕುಲಕರ್ಣಿ, ಸುಬ್ರಮಣ್ಯ ರಂಗಾರಾವ್, ತಡಗವಾಡಿ ಪ್ರಕಾಶ್ ವಿವೇಕಾನಂದ, ಬಕ್ಕೇಶ್ವರ ಪ್ರಮೋದ್ ಮತ್ತು ಹೊಂಬೇಗೌಡ ಶಾಂತಿ ಭೂಷಣ್ ಅವರನ್ನು ನೇಮಕ ಮಾಡುವ ಪ್ರಸ್ತಾವನೆಯನ್ನು ಸುಪ್ರೀಂಕೋರ್ಟ್ ಕೊಲಿಜಿಯಂ ಅನುಮೋದಿಸಿದೆ.

ಈ ಮೂಲಕ ರಾಜ್ಯ ಹೈಕೋರ್ಟ್‌ನ ಕಾರ್ಯನಿರ್ವಹಣಾ ನ್ಯಾಯಮೂರ್ತಿಗಳ ಸಂಖ್ಯೆ ೫೪ಕ್ಕೇ ಏರಿಕೆಯಾಗಲಿದೆ.

---

ರಾಗಿ ಬೆಳೆಯ ಅಭಿವೃದ್ಧಿಗೆ ತಮ್ಮ ಜೀವನವನ್ನೇ ಸಮರ್ಪಿಸಿದ ಮಹಾನ್ ಕೃಷಿ ವಿಜ್ಞಾನಿ ರಾಗಿ ಲಕ್ಷ್ಮಣಯ್ಯ ಅವರ ಸಂಶೋಧನೆ, ರೈತರ ಮೇಲಿನ ಅಪಾರ ಕಾಳಜಿ ಇಂದಿನ ಕೃಷಿ ವಿಜ್ಞಾನಿಗಳು, ವಿದ್ಯಾರ್ಥಿಗಳು ಮತ್ತು ರೈತರಿಗೆ ಮಾರ್ಗದರ್ಶಿಯಾಗಿವೆ ಎಂದು ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಕೆ.ಸಿ. ನಾರಾಯಣಸ್ವಾಮಿ ತಿಳಿಸಿದ್ದಾರೆ.

ರಾಗಿ ಲಕ್ಷ್ಮಣಯ್ಯ, ಸಾಮಾನ್ಯ ರೈತ ಕುಟುಂಬದಲ್ಲಿ ಜನಿಸಿ ತಮ್ಮ ಪರಿಶ್ರಮ, ಬದ್ಧತೆ ಮತ್ತು ವೈಜ್ಞಾನಿಕ ದೃಷ್ಟಿಕೋನದ ಮೂಲಕ ಕೃಷಿ ಕ್ಷೇತ್ರದಲ್ಲಿ ಅಪ್ರತಿಮ ಸಾಧನೆ ಮಾಡಿದ್ದಾರೆ. ರಾಗಿ ಬೆಳೆಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅವರು ಅಭಿವೃದ್ಧಿಪಡಿಸಿದ ಇಂಡಾಫ್ ಸರಣಿಯ ತಳಿಗಳು ರಾಗಿ ಸಂಶೋಧನೆಯಲ್ಲಿ ಹೊಸ ಅಧ್ಯಾಯವನ್ನು ಬರೆದಿವೆ ಎಂದು ಹೇಳಿದ್ದಾರೆ.

ಅವರ ಬಹುತೇಕ ಸಂಶೋಧನಾ ಕಾರ್ಯಗಳು ಮಂಡ್ಯದ ವಿ.ಸಿ. ಫಾರಂನಲ್ಲಿ ನಡೆದಿರುವುದು ವಿಶ್ವವಿದ್ಯಾಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಇದೇ ೨೦ರಿಂದ ಆರಂಭವಾಗಲಿದ್ದು, ಅಕ್ಟೋಬರ್ ೭ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟವಾಗಲಿದೆ. ಈ ದಿಸೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ಕೆ ಅಗತ್ಯ ಸಿಬ್ಬಂದಿ ನಿಯೋಜಿಸಿದ್ದು, ತರಬೇತಿ ನೀಡಲಾಗುತ್ತಿದೆ ಎಂದು ದೊಡ್ಡಬಳ್ಳಾಪುರ ಉಪವಿಭಾಗಾಧಿಕಾರಿ ಮಂಜುನಾಥ್ ತಿಳಿಸಿದ್ದಾರೆ.

ಕೋಲಾರ ಜಿಲ್ಲೆಯಲ್ಲಿ 'ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ-೨೦೨೬' ಹಮ್ಮಿಕೊಳ್ಳಲಾಗಿದೆ ಎಂದು ಕೋಲಾರ ಜಿಲ್ಲಾಧಿಕಾರಿ ಡಾ. ಎಂ. ಆರ್. ರವಿ ತಿಳಿಸಿದ್ದಾರೆ. ಕರಡು ಮತದಾರರ ಪಟ್ಟಿಯನ್ನು ಆಗಸ್ಟ್ ೦೫ರಂದು ಪ್ರಕಟಿಸಲಾಗುತ್ತಿದ್ದು, ಆಗಸ್ಟ್ ೦೫ ರಿಂದ ಸೆಪ್ಟೆಂಬರ್ ೪ರವರೆಗೆ  ಹಕ್ಕು ಮತ್ತು ಆಕ್ಷೇಪಣಾ ಅರ್ಜಿಗಳ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದ್ದಾರೆ.

ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಆರೋಗ್ಯಕರ ಮತದಾರರ ಪಟ್ಟಿ ತಯಾರಿಸುವಂತೆ ಹಾಸನ ಜಿಲ್ಲಾಧಿಕಾರಿ ಲತಾ ಕುಮಾರಿ ತಿಳಿಸಿದ್ದಾರೆ. ಬಿ.ಎಲ್.ಓ.ಗಳು ಎಚ್ಚರಿಕೆಯಿಂದ ಕೆಲಸ ಮಾಡಿ ಮತದಾರರು ಭರ್ತಿ ಮಾಡಿ ನೀಡಿದ ನಮೂನೆಗಳನ್ನು ವಿಳಂಬವಾಗದಂತೆ ಅಪ್ಲೋಡ್ ಮಾಡಲು ನಿಗಾ ವಹಿಸಬೇಕು ಎಂದು ಸೂಚಿಸಿದ್ದಾರೆ.

---

ಇನ್ನು ಹವಾವರ್ತಮಾನ...

ನಾಳೆ ಕೇರಳಗೆ ನೈಋತ್ಯ ಮುಂಗಾರು ಪ್ರವೇಶಿಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಈ ನಡುವೆ ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳ ಕೆಲವೆಡೆ ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗಲಿದೆ. ರಾಜ್ಯದ ಉತ್ತರ ಒಳನಾಡು, ದಕ್ಷಿಣ ಒಳನಾಡು ಜಿಲ್ಲೆಗಳ ಕೆಲವೆಡೆ ಮಳೆಯಾಗಲಿದೆ.

ಬೆಂಗಳೂರಿನಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿರಲಿದ್ದು, ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

______________________

ಸಂಕ್ಷಿಪ್ತ ಸುದ್ದಿಗಳು

೧. ಗದಗ ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ, ಕುಡಿಯುವ ನೀರಿನ ಪೂರೈಕೆ, ಮಳೆ ಹಾನಿ ಪರಿಹಾರ, ಕೃಷಿ ಚಟುವಟಿಕೆಗಳಿಗೆ ಅಗತ್ಯ ಬೀಜ ಹಾಗೂ ಗೊಬ್ಬರಗಳ ಲಭ್ಯತೆ ಕುರಿತು ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

___________ ಮುಕ್ತಾಯ __________